₹ 6 @vishwavaninews epaper.vishwavani.news vishwavani.news **ಬೆಂಗಳೂರು** | ಹುಬ್ಬಳ್ಳಿ | ಮಂಗಳೂರು | ದಾವಣಗೆರೆ | ಕಲಬುರಗಿ | ಬೆಳಗಾವಿ **ಮಂಗಳವಾರ 13.01.2026** **ಸಂಪುಟ:** 10 **ಸಂಚಿಕೆ:** 363 **ಪುಟಗಳು:** 12 **ಪ್ರಧಾನ ಸಂಪಾದಕ:** ವಿಶ್ವೇಶ್ವರ ಭಟ್

# ವಿಶ್ವವಾಣಿ

ವಿಶ್ವಾಸವೇ ವಿಶ್ವ



ಬೆಂಗಳೂರಿನಲ್ಲಿ ನಡೆದ ವಿಜಯ್ ಹಜಾರೆ ಟ್ರೋಫಿ ಕ್ವಾರ್ಟರ್ ಫೈನಲ್ ಪಂದ್ಯದಲ್ಲಿ ಮುಂಬೈ ತಂಡವನ್ನು 55 ರನ್ ಅಂತರದಿಂದ ಸೋಲಿಸಿ ಸೆಮಿಫೈನಲ್ ಪ್ರವೇಶಿಸಿದೆ. ರಾಜ್ಯದ ಪರ ದೇವದತ್ ಪಡಿಕ್ಕಲ್ (81) ಹಾಗೂ ಕರುಣ್ ನಾಯರ್ (74) ಅಜೇಯ ಆಟದ ಮೂಲಕ ಗೆಲುವಿನ ರೂವಾರಿಯಾದರು.

## ಸೊಂಪಾದ ಪುಟಗಳು



ಶಿಕ್ಷಣದಲ್ಲಿ ಮಾತೃಭಾಷೆ ಕಡ್ಡಾಯ ನಿಜಕ್ಕೂ ಸಾಧ್ಯವೇ?

ಅಶ್ವತ್ಥಕಟ್ಟೆ
ರಂಜಿತ್ ಎಚ್. ಅಶ್ವತ್ಥ 6



ಇರಾನಿನಲ್ಲಿ ಏನಾಗುತ್ತಿದೆ? ಏಕಾಗುತ್ತಿದೆ?


ವಿಶ್ವರಂಗ
ರಂಗಸ್ವಾಮಿ ಮೂಕನಹಳ್ಳಿ 7

## ದಾರಿದೀಪೋಕ್ತಿ



ಸೋಲು ಎಂಬುದು ಅಂತಿಮವಲ್ಲ, ಅದು ಗೆಲುವಿನ ಹಾದಿಯಲ್ಲಿ ಸಿಗುವ ಒಂದು ಪಾಠವಷ್ಟೇ. ನಿಮ್ಮ ಗುರಿಯತ್ತ ಸಾಗುವ ಹಾದಿಯಲ್ಲಿ ಅಡೆತಡೆಗಳು ಎದುರಾದಾಗ ಧೃತಿಗೆಡಬೇಡಿ. ಕತ್ತಲೆ ಹೆಚ್ಚಾದಷ್ಟೂ ಸೂರ್ಯೋದಯ ಹತ್ತಿರವಿದೆ ಎಂದರ್ಥ.

## ವಕ್ರತುಂಡೋಕ್ತಿ



ಮೇಕಪ್ ಮತ್ತು ಹೆಲ್ಮೆಟ್ ಎರಡೂ ಒಂದೇ. ಎರಡೂ ಮುಖದ ರಕ್ಷಣೆಗೇ ಇರುವುದು, ಒಂದು ಅಪಘಾತದಿಂದ ರಕ್ಷಿಸಿದರೆ, ಇನ್ನೊಂದು ಅಸಲಿ ರೂಪದ ಆಘಾತದಿಂದ.

## ಶ್ರೀನಿವಾಸ ಕುಲಕರ್ಣಿಗೆ ರಾಯಲ್ ಸೊಸೈಟಿ ಪದಕ



**ಲಂಡನ್:** ಅಮೆರಿಕದಲ್ಲಿ ನೆಲೆಸಿರುವ ಭಾರತ ಮೂಲದ ಖಗೋಳ ವಿಜ್ಞಾನಿ ಪ್ರೊಫೆಸರ್ ಶ್ರೀನಿವಾಸ ಕುಲಕರ್ಣಿ ಅವರಿಗೆ ಇಂಗ್ಲೆಂಡ್‌ನ ರಾಯಲ್ ಅಸ್ಟ್ರೊನಾಮಿಕಲ್ ಸೊಸೈಟಿ ಯ (ಆರ್‌ಎಎಸ್) ಚಿನ್ನದ ಪದಕ ಲಭಿಸಿದೆ. ಖಗೋಳ ವಿಜ್ಞಾನಕ್ಕೆ ಸಂಬಂಧಿಸಿದಂತೆ ಹಲವು ಮಹತ್ವದ ಸಂಶೋಧನೆಗಳನ್ನು ಕೈಗೊಂಡಿರುವ ಶ್ರೀನಿವಾಸ್ ಕುಲಕರ್ಣಿ ಅವರು, ರಾಜ್ಯಸಭಾ ಸದಸ್ಯೆ ಸುಧಾ ಮೂರ್ತಿ ಅವರ ಸಹೋದರ. ಕ್ಯಾಲಿಫೋರ್ನಿಯಾ ಇನ್ಸ್ಟಿಟ್ಯೂಟ್ ಆಫ್ ಟೆಕ್ನಾಲಜಿಯಲ್ಲಿ ಪ್ರಾಧ್ಯಾಪಕರಾಗಿರುವ ಕುಲಕರ್ಣಿ ಅವರು ಖಗೋಳ ಭೌತಶಾಸ್ತ್ರದಲ್ಲಿ ಕ್ಷಣಿಕ ಬಹುತರಂಗಾಂತರದ ಕುರಿತಾದ ಸುಸ್ಥಿರ, ನವೀನ ಮತ್ತು ಅಭೂತಪೂರ್ವ ಅನ್ವೇಷಣೆಯ ಕೊಡುಗೆಯನ್ನು ಚಿನ್ನದ ಪದಕ ಆಯ್ಕೆಗೆ ಪರಿಗಣಿಸಲಾಗಿದೆ.

## ಪವಿತ್ರಾಗೆ ಮನೆಯೂಟ: ಹೈಕೋರ್ಟ್ ಸಮ್ಮತಿ




**ಬೆಂಗಳೂರು:** ಚಿತ್ರದುರ್ಗ ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಜೈಲು ಸೇರಿರುವ ಪವಿತ್ರಾ ಗೌಡಗೆ ವಾರಕ್ಕೊಮ್ಮೆ ಮನೆಯೂಟ ನೀಡಲು ಹೈಕೋರ್ಟ್ ಅವಕಾಶ ನೀಡಿದೆ. ಸೋಮವಾರ ಈ ಕುರಿತ ಪವಿತ್ರಾ ಅರ್ಜಿ ವಿಚಾರಣೆ ನಡೆಸಿದ ಕೋರ್ಟ್ ವಾರಕ್ಕೊಮ್ಮೆ ಮನೆಯೂಟ ನೀಡಲು ಸೂಚಿಸಿದೆ. ಆರೋಗ್ಯದಲ್ಲಿ ವ್ಯತ್ಯಾಸವಾದರೆ ವೈದ್ಯರ ಸಲಹೆ ಮೇರೆಗೆ ಊಟ ನೀಡಬೇಕು ಎಂದು ತಿಳಿಸಿದೆ. ಈ ಮೊದಲು ಆರೋಪಿ ಪವಿತ್ರಾ ಗೌಡ ಸೇರಿ ನಾಗರಾಜು, ಲಕ್ಷ್ಮಣ್ ಮನೆಯೂಟ ಬೇಕೆಂದು ಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು. ಈ ಮನವಿಯನ್ನು ನ್ಯಾಯಾಲಯ ಪುರಸ್ಕರಿಸಿತು.

## ಫನ್‌ತರಂಗ

- ರಘುಪತಿ ಶೃಂಗೇರಿ -

ಒಂದು ದಿನದ ಮಟ್ಟಿಗೆ ಬ್ಲಿಂಕಿಟ್ - ಡೆಲಿವರಿ ಬಾಯ್ ಆದ ಸಂಸದ




### ಇಂದು ಮೈಸೂರು ವಿಮಾನ ನಿಲ್ದಾಣದಲ್ಲಿ ಸಿಎಂ, ಡಿಸಿಎಂ ಭೇಟಿ

### ಕಲಬುರಗಿಗೆ ತೆರಳುವ ಮೊದಲು ಖರ್ಗೆ ಜತೆ ಡಿಕೆ ಸುದೀರ್ಘ ಚರ್ಚೆ

# ರಾಗಾ ಭೇಟಿಗೆ ವೇದಿಕೆ ಸಜ್ಜು

ವಿಶ್ವವಾಣಿ ಸುದ್ದಿಮನೆ ಬೆಂಗಳೂರು

ರಾಜ್ಯ ಕಾಂಗ್ರೆಸ್‌ನಲ್ಲಿ ಕಳೆದ ನಾಲ್ಕು ತಿಂಗಳಿನಿಂದ ಬುಸುಗುಡುತ್ತಿರುವ 'ನಾಯಕತ್ವ' ಗೊಂದಲದ ಬೆನ್ನಲ್ಲೇ ಕಾಂಗ್ರೆಸ್ ವರಿಷ್ಠ ರಾಹುಲ್ ಗಾಂಧಿ ಅವರು ಮಂಗಳವಾರ ಮೈಸೂರಿನಲ್ಲಿ ಸಿಎಂ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರನ್ನು ಭೇಟಿಯಾಗುತ್ತಿರುವುದು ಭಾರಿ ಕುತೂಹಲಕ್ಕೆ ಕಾರಣವಾಗಿದೆ.

ತಮಿಳುನಾಡಿನ ಊಟಿಯಲ್ಲಿ ಆಯೋಜಿಸಿರುವ ಕಾರ್ಯಕ್ರಮದಲ್ಲಿ ಭಾಗವಹಿಸಲು ಆಗಮಿಸುತ್ತಿದ್ದಾರೆ. ಮೈಸೂರಿಗೆ ವಿಶೇಷ ವಿಮಾನದಲ್ಲಿ ಆಗಮಿಸಿ, ಅಲ್ಲಿಂದ ಊಟಿಯತ್ತ ಪ್ರಯಾಣ ಬೆಳೆಸಲಿದ್ದಾರೆ. ಈ ವೇಳೆ ಅವರನ್ನು ಬರಮಾಡಿಕೊಳ್ಳಲು ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಇಬ್ಬರೂ ಮೈಸೂರಿಗೆ ತೆರಳುತ್ತಿದ್ದಾರೆ ಎಂದು ತಿಳಿದುಬಂದಿದೆ.

ಮೈಸೂರಿನಲ್ಲಿ ರಾಹುಲ್ ಗಾಂಧಿ ಅವರನ್ನು ಸ್ವಾಗತಿಸಿದ ಬಳಿಕ ಇಬ್ಬರೂ ನಾಯಕರು ಕೆಲ ಕಾಲ ಚರ್ಚಿಸುವ ಸಾಧ್ಯತೆಯಿದೆ. ರಾಜ್ಯದಲ್ಲಿ ನಾಯಕತ್ವ ಗೊಂದಲ ಭುಗಿಲೆದ್ದ ಬಳಿಕ ರಾಜ್ಯ ನಾಯಕರಿಗೆ ರಾಹುಲ್ ಗಾಂಧಿ ಸಿಕ್ಕಿರಲಿಲ್ಲ. ಈ ಹಿಂದೆ ಭೇಟಿಯಾಗಿದ್ದರೂ, ರಾಜ್ಯ ನಾಯಕತ್ವಕ್ಕೆ ಸಂಬಂಧಿಸಿದಂತೆ ಯಾವುದೇ ಚರ್ಚೆ ಸಾಧ್ಯವಾಗಿರಲಿಲ್ಲ. ಇದೀಗ ಉದಕಮಂಡಲಕ್ಕೆ ತೆರಳುವ ಹಾದಿಯಲ್ಲಿ ರಾಹುಲ್, ಕೆಲ ಕಾಲ ಮೈಸೂರಿನಲ್ಲಿ ತಂಗಲಿದ್ದು ಈ ಸಮಯವನ್ನು ಬಳಸಿಕೊಂಡು ಇಬ್ಬರೂ ನಾಯಕರು ತಮ್ಮ 'ಪ್ರಸ್ತಾಪ'ಗಳನ್ನು ಮುಂದಿಡಲಿದ್ದಾರೆಂದು ತಿಳಿದುಬಂದಿದೆ.

**ಖರ್ಗೆ ಭೇಟಿಯಾದ ಡಿಕೆಶಿ:** ಬೆಂಗಳೂರಿಗೆ ಆಗಮಿಸಿರುವ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸೋಮವಾರ ಬೆಳಗ್ಗೆ ಭೇಟಿಯಾಗಿ ಚರ್ಚಿಸಿರುವುದು ಭಾರಿ ಕುತೂಹಲ ಮೂಡಿಸಿದೆ. ಕಲಬುರಗಿಯಲ್ಲಿ ಆಯೋಜಿಸಲಾಗಿದ್ದ ಕಾರ್ಯಕ್ರಮದಲ್ಲಿ ಭಾಗವಹಿಸಲು ಮುಖ್ಯಮಂತ್ರಿ ಸಿದ್ದರಾಮಯ್ಯ, ಡಿಕೆ ಶಿವಕುಮಾರ್ ಹಾಗೂ ಮಲ್ಲಿಕಾರ್ಜುನ ಖರ್ಗೆ ಅವರು ವಿಶೇಷ ವಿಮಾನದಲ್ಲಿ ತೆರಳಿದರೂ, ಅದಕ್ಕೂ ಮೊದಲು ಡಿಕೆಶಿ, ಖರ್ಗೆ ಅವರನ್ನು ಭೇಟಿಯಾಗಿ 45 ನಿಮಿಷಗಳ ಕಾಲ ಚರ್ಚೆ ನಡೆಸಿರುವುದು ಹಲವು ರೀತಿಯ ವ್ಯಾಖ್ಯಾನಗಳಿಗೆ ಕಾರಣವಾಗಿದೆ.

ಇಬ್ಬರ ಭೇಟಿಯ ವೇಳೆ ಸುಮಾರು 45 ನಿಮಿಷಗಳ ಕಾಲ ಚರ್ಚೆ ನಡೆಸಿದ್ದಾರೆ. ಅಧಿಕಾರ ಹಂಚಿಕೆಯ ಗೊಂದಲದ ನಡುವೆ ನಡೆದ ಈ ಸುದೀರ್ಘ ಮಾತುಕತೆ ರಾಜ್ಯ ಕಾಂಗ್ರೆಸ್‌ನಲ್ಲಿ ಭಾರಿ ಕುತೂಹಲವನ್ನು ಮೂಡಿಸಿದೆ. ಭೇಟಿಯ ವೇಳೆ ಪ್ರಮುಖವಾಗಿ ಪಕ್ಷದಲ್ಲಿ ಉದ್ಭವಿಸಿರುವ ನಾಯಕತ್ವ ಗೊಂದಲಕ್ಕೆ ಸಂಬಂಧಿಸಿದಂತೆ ಚರ್ಚೆ ನಡೆಸಿದ್ದಾರೆ ಎಂದು ತಿಳಿದುಬಂದಿದೆ. ಇದರೊಂದಿಗೆ ರಾಹುಲ್ ಗಾಂಧಿ ಹಾಗೂ ಸೋನಿಯಾ ಗಾಂಧಿ ಅವರ ಭೇಟಿಗೆ ಹಲವು ದಿನಗಳಿಂದ ಪ್ರಯತ್ನಿಸುತ್ತಿದ್ದರೂ ಅವಕಾಶ ಸಿಗುತ್ತಿಲ್ಲ. ಆದ್ದರಿಂದ ಅವರ ಭೇಟಿಗೆ ಅವಕಾಶ ಕೊಡಿಸುವಂತೆ ಮನವಿ ಮಾಡಿದ್ದಾರೆ ಎಂದು ತಿಳಿದುಬಂದಿದೆ.

ರಾಜ್ಯದಲ್ಲಿ ಉದ್ಭವಿಸಿರುವ ಗೊಂದಲಕ್ಕೆ ಹೈಕಮಾಂಡ್ ಸ್ಪಷ್ಟನೆ ನೀಡಬೇಕಿದೆ. ಇಲ್ಲದೇ ಹೋದರೆ ಪಕ್ಷದ ವರ್ಚಸ್ಸಿಗೆ ಧಕ್ಕೆ ಆಗಲಿದೆ. ಪಕ್ಷದ ಹೈಕಮಾಂಡ್ ಯಾವುದೇ ತೀರ್ಮಾನ ಕೈಗೊಳ್ಳುವುದಿದ್ದರೂ ಅದನ್ನು ಬಹಿರಂಗವಾಗಿ ಹೇಳಬೇಕು. ಇಲ್ಲದೇ ಹೋದರೆ, ಶಾಸಕರನ್ನು ನಿಯಂತ್ರಿಸುವುದು ಕಷ್ಟವಾಗಲಿದೆ. ಇದು ಮುಂಬರಲಿರುವ ಸ್ಥಳೀಯ ಸಂಸ್ಥೆ ಚುನಾವಣೆಯ ಮೇಲೆ ಹೊಡೆತ ಬೀಳಲಿದೆ ಎಂದು ವಿವರಿಸಿದ್ದಾರೆ. ಇದಕ್ಕೆ ಖರ್ಗೆ ಅವರು ಶೀಘ್ರದಲ್ಲಿಯೇ ಈ ಬಗ್ಗೆ ಸೋನಿಯಾ, ರಾಹುಲ್ ಜತೆ ಚರ್ಚಿಸಿ ಮುಂದಿನ ನಿರ್ಧಾರ ಮಾಡಲಾಗುವುದು ಎಂದು ಭರವಸೆ ನೀಡಿದ್ದಾರೆ ಎಂದು ತಿಳಿದುಬಂದಿದೆ.



ಕಲಬುರಗಿ ಜಿಲ್ಲೆಯಲ್ಲಿ ಕೈಗೊಂಡ 906 ಕೋಟಿ ರು.ವೆಚ್ಚದ ವಿವಿಧ ಕಾಮಗಾರಿಗಳಿಗೆ ಯಡ್ರಾಮಿಯಲ್ಲಿ ಸಿಎಂ ಸಿದ್ದರಾಮಯ್ಯ ಚಾಲನೆ ನೀಡಿದರು. ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಡಿಸಿಎಂ ಡಿ.ಕೆ.ಶಿವಕುಮಾರ್ ಮತ್ತಿತರ ನಾಯಕರು ಇದ್ದರು.

### ಚುನಾವಣಾ ಸಭೆ ನೆಪದಲ್ಲಿ ಹೈ ಭೇಟಿಗೆ ಡಿಕೆ ಯತ್ನ

ಅಸ್ಸಾಂ ವಿಧಾನಸಭಾ ಚುನಾವಣೆಯ ವೀಕ್ಷಕರಾಗಿ ನೇಮಕವಾಗಿರುವ ಡಿ.ಕೆ.ಶಿವಕುಮಾರ್ ಅವರು, ಚುನಾವಣಾ ಸಭೆಯಲ್ಲಿ ಭಾಗವಹಿಸಲು ದೆಹಲಿಗೆ ತೆರಳಿದಾಗ ಹೈಕಮಾಂಡ್ ನಾಯಕರನ್ನು ಭೇಟಿಯಾಗಲು ಪ್ರಯತ್ನಿಸುವ ಸಾಧ್ಯತೆಯಿದೆ ಎಂದು ಮೂಲಗಳು ತಿಳಿಸಿವೆ. ಅಸ್ಸಾಂ ವಿಧಾನಸಭೆಯ ಚುನಾವಣೆಗೆ ಎಐಸಿಸಿ ಪ್ರಧಾನ ಕಾರ್ಯದರ್ಶಿ ಪ್ರಿಯಾಂಕ ಗಾಂಧಿ ಉಸ್ತುವಾರಿಯಾಗಿದ್ದಾರೆ. ಆದ್ದರಿಂದ ಚುನಾವಣಾ ಸಂಬಂಧಪಟ್ಟ ಚರ್ಚೆಗೆ 16 ಮತ್ತು 22ರಂದು ದೆಹಲಿಯಲ್ಲಿ ಸಭೆ ನಡೆಯಲಿದೆ. ಈ ಸಭೆಯಲ್ಲಿ ಭಾಗವಹಿಸಲು ತೆರಳಿದಾಗ ರಾಹುಲ್ ಗಾಂಧಿ ಮತ್ತು ಸೋನಿಯಾ ಗಾಂಧಿ ಅವರನ್ನು ಭೇಟಿಯಾಗಲು ಪ್ರಯತ್ನಿಸಿದ್ದಾರೆ. ಇದೇ ವಿಷಯವನ್ನು ಮಲ್ಲಿಕಾರ್ಜುನ ಖರ್ಗೆ ಅವರೊಂದಿಗೆ ಚರ್ಚಿಸಿದ್ದು, ಭೇಟಿಗೆ ಅವಕಾಶ ಕೊಡಿಸುವ ಭರವಸೆ ನೀಡಿದ್ದಾರೆ ಎಂದು ತಿಳಿದುಬಂದಿದೆ.



ಅಧಿಕಾರ ಹಂಚಿಕೆಯ ಸಂಬಂಧ ಪಟ್ಟಂತೆ ಅಗತ್ಯವಿದ್ದರೆ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ದೆಹಲಿಗೆ ಕರೆಸಲಾಗುವುದು.

-ಮಲ್ಲಿಕಾರ್ಜುನ ಖರ್ಗೆ, ಎಐಸಿಸಿ ಅಧ್ಯಕ್ಷ

### ಕೋಗಿಲು ಪ್ರಕರಣ ಎನ್‌ಐಎಗೆ ವಹಿಸಲು ಬಿಜೆಪಿ ಆಗ್ರಹ : ಸತ್ಯಶೋಧನಾ ಸಮಿತಿಯಿಂದ ವರದಿ

# ಬೆಂಗಳೂರಲ್ಲಿ 2 ಲಕ್ಷ ಬಾಂಗ್ಲಾದೇಶಿಯರು!



**ಬೆಂಗಳೂರು:** ಕೋಗಿಲು ಬಡಾವಣೆಯ ಅಕ್ರಮ ಮನೆ ತೆರವು ಪ್ರಕರಣ ಮಹತ್ವದ ತಿರುವು ಪಡೆದುಕೊಂಡಿದ್ದು, ಬೆಂಗಳೂರು ಸೇರಿದಂತೆ ರಾಜ್ಯದಲ್ಲಿ ಲಕ್ಷಾಂತರ ಬಾಂಗ್ಲಾದೇಶಿಯರಲ್ಲದೆ ರೋಹಿಂಗ್ಯಾಗಳು ಅಧಿಕ ಸಂಖ್ಯೆಯಲ್ಲಿ ಒಳನುಸುಳಿರುವುದು ಬಿಜೆಪಿಯ ಸತ್ಯಶೋಧನಾ ವರದಿಯಲ್ಲಿ ಬೆಳಕಿಗೆ ಬಂದಿದ್ದು, ಪ್ರಕರಣವೀಗ ಲೋಕಭವನದ ಮೆಟ್ಟಿಲು ಹತ್ತಿದೆ.

ಎರಡು ಲಕ್ಷಕ್ಕೂ ಅಧಿಕ ಬಾಂಗ್ಲಾ ಮತ್ತು ರೋಹಿಂಗ್ಯಾಗಳು ಬೆಂಗಳೂರಿನಲ್ಲಿ ಇದ್ದಾರೆ. ಇವರನ್ನು ವಶಕ್ಕೆ ಪಡೆದ ಹಿನ್ನೆಲೆ ಪರಿಶೀಲಿಸಿ ಅವರ ದೇಶಕ್ಕೆ ವಾಪಸ್ ಕಳಿಸಬೇಕು. ಅಕ್ರಮ ವಲಸಿಗರಿಗೆ ನಿಯಮ ಮೀರಿ ಮನೆಗಳ ಹಂಚಿಕೆ ಮಾಡಬಾರದು. ಪೊಲೀಸರು ಅಕ್ರಮ ನುಸುಳುಕೋರರ ಹಿನ್ನೆಲೆ ಪರಿಶೀಲನೆ ಮಾಡಬೇಕು. ಸರಕಾರ ಇದರ ಬಗ್ಗೆ ಸೂಕ್ತ ತನಿಖೆ ಮಾಡಬೇಕು. ರಾಜ್ಯ ಸರಕಾರದಿಂದ ತನಿಖೆ ಆಗದಿದ್ದರೆ ಎನ್‌ಐಎ ತನಿಖೆ ಮಾಡಿಸಬೇಕು ಎಂದು ಬಿಜೆಪಿ ಆಗ್ರಹಿಸಿದೆ.

ಕೋಗಿಲು ಬಡಾವಣೆಯಲ್ಲಿ ಅಕ್ರಮ ಮನೆಗಳ ತೆರವು ಪ್ರಕರಣ ಸಂಬಂಧ ಶಾಸಕ ಎಸ್.ಆರ್. ವಿಶ್ವನಾಥ್ ನೇತೃತ್ವದ ಸತ್ಯಶೋಧನಾ ತಂಡ ಬಿಜೆಪಿ ರಾಜ್ಯಾಧ್ಯಕ್ಷ ಬಿ. ವೈ. ವಿಜಯೇಂದ್ರಗೆ ಅಧ್ಯಯನ ವರದಿ ಸಲ್ಲಿಕೆ ಮಾಡಿದೆ. ನಂತರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು,ಕೋಗಿಲು ಅಕ್ರಮ ಮನೆಯ ಪ್ರದೇಶ ಮೊದಲು ದೊಡ್ಡ ಬಂಡೆ ಜಾಗ, ಖರಾಬು ಜಾಗವಾಗಿತ್ತು. ಇಲ್ಲಿ ಕಟ್ಟಡ ತ್ಯಾಜ್ಯ ಹಾಕಿ ಹಳ್ಳ ಮುಚ್ಚುತ್ತಾ ಬಂದರು. ಕಾಂಗ್ರೆಸ್‌ನ ಸ್ಥಳೀಯ ಮುಖಂಡರು ಅಕ್ರಮ ನಿವೇಶನ ಮಾಡಿದ್ದರು. ಬಿಬಿಎಂಪಿ ಘನತ್ಯಾಜ್ಯ ಸಂಸ್ಕರಣಾ ಘಟಕಕ್ಕೆ ಆ ಜಾಗ ಮೀಸಲಿದ್ದರೂ ಅಲ್ಲಿ ಗುಡಿಸಲುಗಳನ್ನು ಕಟ್ಟಿಕೊಳ್ಳಲು ಸಹಾಯ ಮಾಡಿದರು. ಈಗಲೂ ಅಲ್ಲಿ ಅಕ್ರಮ ಗುಡಿಸಲುಗಳಿದ್ದು ಇನ್ನೂ ತೆರವು ಮಾಡಿಲ್ಲ. ಸರಕಾರ ಮೊದಲು ಅಕ್ರಮ ಗುಡಿಸಲುಗಳನ್ನು ತೆರವು ಮಾಡಿದಾಗ ಸರಿ ಇತ್ತು. ನಂತರ ಪಿಣರಾಯಿ ವಿಜಯನ್, ವೇಣುಗೋಪಾಲ್ ಮಧ್ಯಪ್ರವೇಶವಾಗಿ ಚುನಾವಣಾ ದೃಷ್ಟಿಯಿಂದ ಅಲ್ಲಿದ್ದವರಿಗೆ ಪುನರ್ವಸತಿಗೆ ಇಬ್ಬರೂ ಸೂಚಿಸಿದ್ದರು ಎಂದು ಆರೋಪಿಸಿದರು.

→10

ಕಾಂಗ್ರೆಸ್ ನಾಯಕರ ಎಡಬಲದಲ್ಲಿ ಇದ್ದವರೇ ಅಕ್ರಮ ನಿವಾಸಿಗಳ ವಾಸ್ತವ್ಯಕ್ಕೆ ಕಾರಣ. ನಾವು ಹೋಗಿದ್ದಾಗ ರೋಹಿಂಗ್ಯಾ, ಬಾಂಗ್ಲಾದವರು ಇರಲಿಲ್ಲ. 10.30 ಲಕ್ಷ ಮೌಲ್ಯದ ಮನೆಗಳನ್ನು 2.5 ಲಕ್ಷ ಕೊಟ್ರೆ ಸಾಕು ಕೊಡುತ್ತೇವೆ ಎಂದು ಸರಕಾರ ಹಂಚಲು ಹೊರಟಿದೆ. ಸಮಿತಿ ಸ್ಥಳ ಪರಿಶೀಲನೆ ಮಾಡುವ ಸಮಯದಲ್ಲಿ ಅಕ್ರಮವಾಗಿ ಇದ್ದವನ್ನು ಕೂಡಲೇ ಸ್ಥಳಾಂತರಿಸಿ, ಸುತ್ತಮುತ್ತಲ ಬಡಾವಣೆಗಳ ಜನರನ್ನು ತಂದು ಇರಿಸಿದರು.

-ಎಸ್.ಆರ್.ವಿಶ್ವನಾಥ್, ಸತ್ಯಶೋಧನಾ ಸಮಿತಿ ಮುಖ್ಯಸ್ಥ

### 8 ತಿಂಗಳಲ್ಲಿ 2ನೇ ವೈಫಲ್ಯ, ಇಸ್ರೋ ವಿಜ್ಞಾನಿಗಳಿಗೆ ನಿರಾಶೆ

# ಪಿಎಸ್‌ಎಲ್‌ವಿ-ಸಿ 62 ವಿಫಲ: ಕಕ್ಷೆ ಸೇರದ 16 ಉಪಗ್ರಹ


**ಶ್ರೀಹರಿಕೋಟ:** ಭಾರತೀಯ ಬಾಹ್ಯಾಕಾಶ ಸಂಸ್ಥೆಯ 2026ರ ಸಾಲಿನ ಮೊದಲ ಉಪಗ್ರಹ ಉಡ್ಡಯನ ವಿಫಲವಾಗಿದೆ. 16 ಉಪಗ್ರಹಗಳನ್ನು ಹೊತ್ತು ಆಂಧ್ರಪ್ರದೇಶ ಶ್ರೀಹರಿಕೋಟದ ಸತೀಶ್ ಧವನ್ ಬಾಹ್ಯಾಕಾಶ ಕೇಂದ್ರದಿಂದ ಅಂತರಿಕ್ಷದತ್ತ ನೆಗೆದ ಪಿಎಸ್ ಎಲ್‌ವಿ-ಸಿ 62 ರಾಕೆಟ್ ಯಶಸ್ವಿ ಯಾಗಿ ಉಡ್ಡಯನವಾದರೂ ಮೂರನೇ ಹಂತದಲ್ಲಿ ನಿಯಂತ್ರಣ ಕಳೆದುಕೊಂಡಿತು. ಇದರೊಂದಿಗೆ ಈ ಉಪಗ್ರಹಗಳು ನಿಗದಿತ ಕಕ್ಷೆ ಸೇರಲು ವಿಫಲವಾಗಿವೆ.

ಎಂಟು ತಿಂಗಳಲ್ಲಿ ಇಸ್ರೋದ ಎರಡನೇ ವೈಫಲ್ಯ ಇದಾಗಿದೆ. 260 ಟನ್ ತೂಕದ ಪಿಎಸ್ ಎಲ್‌ವಿ -ಡಿಎಲ್ ರೂಪಾಂತರವು ಸೋಮವಾರ ಬೆಳಿಗ್ಗೆ 10:17 ಕ್ಕೆ ಆಕಾಶದೆತ್ತ ರಕ್ಕೆ ಹಾರಿತು. ಮೊದಲ ಎರಡು ಹಂತಗಳು



ಯಶಸ್ವಿಯಾಗಿ ನಡೆದರೂ 3ನೇ ಹಂತದ ದಹನದ ನಂತರ ಕಾರ್ಯಾಚರಣೆ ವಿಫಲವಾಗಿರುವುದು ಇಸ್ರೋ ವಿಜ್ಞಾನಿಗಳಿಗೆ ನಿರಾಶೆ ತಂದಿದೆ. ಕಳೆದ ವರ್ಷವೂ ಪಿಎಸ್‌ಎಲ್‌ವಿ ಸಿ-61 ಸುಸ್ಥಿರ ಕಕ್ಷೆಯ ಸೇರುವಲ್ಲಿ ವಿಫಲವಾಗಿತ್ತು. ಕಡಲು ಕಣ್ಗಾವಲಿಗಾಗಿ ಡಿಆರ್‌ಡಿಓ ಅಭಿವೃದ್ಧಿಪಡಿಸಿದ ಅನ್ವೇಷಾ ಉಪಗ್ರಹವಲ್ಲದೆ ಭಾರತೀಯ ವಿದ್ಯಾರ್ಥಿಗಳು ಸಿದ್ಧಪಡಿಸಿದ ಪೇಲೋಡ್‌ಗಳು, ಖಾಸಗಿ ಸಂಸ್ಥೆಯ ಪ್ರಯೋಗಾರ್ಥ ಉಪಗ್ರಹಗಳು ಈ ಉಡ್ಡಯನ ಯೋಜನೆಯ ಭಾಗವಾಗಿದ್ದವು.

→10



ಎರಡು ದಿನಗಳ ಭೇಟಿಗಾಗಿ ಭಾರತಕ್ಕೆ ಆಗಮಿಸಿರುವ ಜರ್ಮನಿಯ ಚಾನ್ಸಲರ್ ಫ್ರೆಡ್ರಿಕ್ ಮೆರ್ಜ್, ನರೇಂದ್ರ ಮೋದಿ ಅವರೊಂದಿಗೆ ಸಬರಮತಿ ನದಿ ದಂಡೆಯಲ್ಲಿ ಆಯೋಜಿಸಲಾಗಿದ್ದ ಗುಜರಾತ್ ಅಂತಾರಾಷ್ಟ್ರೀಯ ಗಾಳಿಪಟ ಉತ್ಸವವನ್ನು ಉದ್ಘಾಟಿಸಿ ಸಂಭ್ರಮಿಸಿದರು.

# ನಮ್ಮ ಮೆಟ್ರೋ ಮತ್ತೆ ದುಬಾರಿ

**ಬೆಂಗಳೂರು:** ನಮ್ಮ ಮೆಟ್ರೋ ಈ ವರ್ಷ ಮತ್ತೆ ದರ ಏರಿಕೆ ಮಾಡಲು ಮುಂದಾಗಿದ್ದು, 2026 ಫೆಬ್ರವರಿಯಿಂದ ಜಾರಿಗೆ ಬರುವಂತೆ ಪ್ರಯಾಣ ದರ ಪರಿಷ್ಕರಿಸಲು ಮುಂದಾಗಿದೆ.

ನಮ್ಮ ಮೆಟ್ರೋ ಕಳೆದ ವರ್ಷವಷ್ಟೇ ಶೇ.71ರಷ್ಟು ದರ ಏರಿಕೆ ಮಾಡಿದ್ದು ತೀವ್ರ ಆಕ್ರೋಶಕ್ಕೆ ಕಾರಣವಾಗಿತ್ತು. ಈ ವರ್ಷ ಮತ್ತೆ ಶೇ.5ರಷ್ಟು ದರ ಹೆಚ್ಚಳಕ್ಕೆ ಮುಂದಾಗಿರುವುದು ಸಾರ್ವಜನಿಕ ವಲಯದಲ್ಲಿ ಆಕ್ರೋಶಕ್ಕೆ ಕಾರಣವಾಗಿದೆ. ನೀರು, ಹಾಲು, ಆಸ್ತಿ ತೆರಿಗೆ ಸೇರಿದಂತೆ ನಾನಾ ಸೇವೆಗಳ ದರ ಏರಿಕೆಯಿಂದ ತತ್ತರಿಸಿರುವ ಬೆಂಗಳೂರಿಗರಿಗೆ 2026ರ ಹೊಸ ವರ್ಷದಲ್ಲಿ ಮೆಟ್ರೋ ಮೊದಲ ಬೆಲೆ ಬರೆ ಬೀಳಲಿದೆ ಎನ್ನುವ ಮಾತುಗಳು ಕೇಳಿಬರುತ್ತಿದೆ.

ಶುಲ್ಕ ನಿಗದಿ ಸಮಿತಿ ತಿಳಿಸಿದಂತೆ 2025ರಲ್ಲಿ ದಶಕದ ಬಳಿಕ ಶೇ.71ರಷ್ಟು ಟಿಕೆಟ್ ದರ ಹೆಚ್ಚಿಸಲಾಗಿತ್ತು. ಸಮಿತಿ ವಾರ್ಷಿಕವಾಗಿ ಶೇ. 5ರಷ್ಟು ದರ ಹೆಚ್ಚಿಸಬೇಕೆಂದು ಸೂಚಿಸಿದ್ದು, ಫೆಬ್ರವರಿಯಿಂದ ನಮ್ಮ ಮೆಟ್ರೋ ಪ್ರಯಾಣವು ಮತ್ತಷ್ಟು ದುಬಾರಿ ಆಗಲಿದೆ.

# ಪ್ರಶ್ನೆ ಪತ್ರಿಕೆ ಸೋರಿಕೆ: ಶಿಕ್ಷಕರ ಬಂಧನ

**ಬೆಂಗಳೂರು:** ಎಸ್‌ಎಸ್‌ಎಲ್‌ಸಿ ಪೂರ್ವಸಿದ್ಧತಾ ಪರೀಕ್ಷೆ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣಕ್ಕೆ ಸಂಬಂಧಿಸಿದಂತೆ ಮುಖ್ಯ ಶಿಕ್ಷಕರು ಸೇರಿ ಆರು ಆರೋಪಿಗಳನ್ನು ಉತ್ತರ ವಿಭಾಗದ ಸೈಬರ್ ಕ್ರೈಂ ಠಾಣೆ ಪೊಲೀಸರು ಬಂಧಿಸಿದ್ದಾರೆ.

ಜ.9ರಂದು ಎಸ್‌ಎಸ್‌ಎಲ್‌ಸಿ ಪೂರ್ವಸಿದ್ಧತಾ ಹಿಂದಿ ಪರೀಕ್ಷೆ ನಡೆದಿತ್ತು. ಆದರೆ ಜ. 8ರಂದು ನಿರಂಜನ್ ಶೆಟ್ಟಿ ಹೆಸರಿನ ಯೂಟ್ಯೂಬ್ ಚಾನೆಲ್‌ನಲ್ಲಿ ಪ್ರಶ್ನೆ ಪತ್ರಿಕೆ ಸೋರಿಕೆಯಾಗಿದೆ. ಈ ಸಂಬಂಧ ಪದವಿ ಪೂರ್ವ ಶಿಕ್ಷಣಾ ಇಲಾಖೆಯ ಜಂಟಿ ನಿರ್ದೇಶಕ ರಾಜು ಅವರು ನೀಡಿದ ದೂರಿನ ಹಿನ್ನೆಲೆಯಲ್ಲಿ ಉತ್ತರ ವಿಭಾಗದ ಸೈಬರ್ ಸೆನ್ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿತ್ತು. ತನಿಖೆ ನಡೆಸಿದ ಪೊಲೀಸರು ಮುಖ್ಯ ಶಿಕ್ಷಕರು, ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಸೇರಿದಂತೆ 10 ಮಂದಿಯನ್ನು ವಶಕ್ಕೆ ಪಡೆದು ವಿಚಾರಣೆಗೊಳಪಡಿಸಿದ್ದಾರೆ. ಪ್ರಸ್ತುತ ತುಮಕೂರಿನ ಶಾಲೆಯೊಂದರ ಮುಖ್ಯೋಪಾಧ್ಯಾಯ ಗಿರೀಶ್, ರಾಮನಗರದ ಸಹ ಶಿಕ್ಷಕ ಅಮ್ಜದ್ ಖಾನ್, ಕಲಬುರಗಿಯ ಮುಖ್ಯ ಶಿಕ್ಷಕಿ ಶಾಹಿದಾ ಬೇಗಂ, ಸಹ ಶಿಕ್ಷಕಿ ಫಾಹಿದಾ, ಶಿಕ್ಷಕ ಮೊಹಮದ್ ಸಿರಾಜುದ್ದೀನ್, ಶಿಕ್ಷಕಿ ಫರ್ಜಾನಾ ಬೇಗಂ ಅವರನ್ನು ಬಂಧಿಸಲಾಗಿದೆ. ಇವರ ಜತೆ ನಾಲ್ವರು ವಿದ್ಯಾರ್ಥಿಗಳನ್ನು ವಶಕ್ಕೆ ಪಡೆಯಲಾಗಿದೆ.

ತುಮಕೂರು, ರಾಮನಗರ, ಕಲಬುರಗಿ ಜಿಲ್ಲೆಗಳಲ್ಲಿ ಪೊಲೀಸರು ಕಾರ್ಯಾಚರಣೆ ನಡೆಸಿ ಪ್ರಶ್ನೆಪತ್ರಿಕೆಯನ್ನು ವೈರಲ್ ಮಾಡಿದವರ ಸಾಮಾಜಿಕ ಜಾಲತಾಣದೊಂದಿಗೆ ಮೊಬೈಲ್ ಪರಿಶೀಲನೆ ಮಾಡುತ್ತಿದ್ದಾರೆ. ಈ ಪ್ರಕರಣದಲ್ಲಿ ಮತ್ತಷ್ಟು ಮಂದಿ ಬಂಧನವಾಗುವ ಸಾಧ್ಯತೆಯಿದೆ. ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದು ಪರೀಕ್ಷಾ ಮಂಡಳಿ ಮುಖ್ಯಸ್ಥ ಗೋಪಾಲಕೃಷ್ಣ ತಿಳಿಸಿದ್ದಾರೆ.

### ಜೂನ್ 30ರೊಳಗೆ ಚುನಾವಣೆ ಪ್ರಕ್ರಿಯೆ ಮುಗಿಸಲು ಕಟ್ಟಾಜ್ಞೆ

# ಜಿಬಿಎ, 5 ಮಹಾನಗರ ಪಾಲಿಕೆ ಚುನಾವಣೆಗೆ ಸುಪ್ರೀಂ ಗಡುವು

**ಬೆಂಗಳೂರು:** ದಶಕಗಳಿಂದ ನನೆಗುದಿಗೆ ಬಿದ್ದಿದ್ದ ಗ್ರೇಟರ್ ಬೆಂಗಳೂರು ಪ್ರಾಧಿಕಾರದ ವ್ಯಾಪ್ತಿಯಲ್ಲಿರುವ ಐದು ನಗರ ಪಾಲಿಕೆಗಳ ಚುನಾವಣಾ ಪ್ರಕ್ರಿಯೆಯನ್ನು ಯಾವುದೇ ವಿಳಂಬವಿಲ್ಲದೆ ಜೂನ್ 30ರೊಳಗೆ ಪೂರ್ಣಗೊಳಿಸುವಂತೆ ಸುಪ್ರೀಂ ಕೋರ್ಟ್ ರಾಜ್ಯ ಸರಕಾರ ಮತ್ತು ಚುನಾವಣಾ ಆಯೋಗಕ್ಕೆ ಕಟ್ಟುನಿಟ್ಟಿನ ಆದೇಶ ನೀಡಿದೆ.

ಈ ಹಿಂದೆ ರಾಜ್ಯ ಸರಕಾರವು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ (ಈಗಿನ ಜಿಬಿಎ) ಚುನಾವಣೆಯನ್ನು 2026ರ ಫೆಬ್ರವರಿಯಲ್ಲಿ ನಡೆಸುವುದಾಗಿ ತಿಳಿಸಿತ್ತು. ಆದರೆ, ವಾರ್ಡ್‌ಗಳ ವಿಂಗಡಣೆ, ಮೀಸಲಾತಿ, ಹೊಸ ಪ್ರಾಧಿಕಾರ ರಚನೆ ಹಿನ್ನೆಲೆಯಲ್ಲಿ ಚುನಾವಣಾ ದಿನಾಂಕ ಪ್ರಕಟಿಸಿರಲಿಲ್ಲ. ನೂತನವಾಗಿ ರಚನೆಯಾಗಿರುವ ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಅಡಿಯಲ್ಲಿ ಬರುವ ಐದು ನಗರ ಪಾಲಿಕೆಗಳ ಚುನಾವಣಾ ಪ್ರಕ್ರಿಯೆಯನ್ನು ಜೂನ್ 30 ರೊಳಗೆ ಪೂರ್ಣಗೊಳಿಸುವಂತೆ ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್ ಮತ್ತು ನ್ಯಾಯಮೂರ್ತಿ ಜೋಯ್ಮಲ್ಯ ಬಾಗ್ಚಿ ಅವರಿದ್ದ ಪೀಠವು ಗಡುವು ವಿಧಿಸಿ ಆದೇಶಿಸಿದೆ.

→10

### ಚುನಾವಣೆಯತ್ತ ನೋಟ

- ಕಳೆದ ಆರು ವರ್ಷಗಳಿಂದ ಬೆಂಗಳೂರು ಮಹಾನಗರಪಾಲಿಕೆಯಲ್ಲಿ ಚುನಾಯಿತ ಜನಪ್ರತಿನಿಧಿಗಳಿಲ್ಲ
- 2019ರಲ್ಲಿ ಬಿಬಿಎಂಪಿ ಅವಧಿ ಮುಕ್ತಾಯ, ವಾರ್ಡ್ ಪುನರ್‌ವಿಂಗಡಣೆ ನೆಪದಲ್ಲಿ ಚುನಾವಣೆ ಮುಂದಕ್ಕೆ
- ಬೆಂಗಳೂರನ್ನು ಗ್ರೇಟರ್ ಪ್ರಾಧಿಕಾರವನ್ನಾಗಿ ಪರಿವರ್ತಿಸುವ ಪ್ರಕ್ರಿಯೆಯಿಂದಾಗಿ ಚುನಾವಣೆ ವಿಳಂಬ.
- ಜಿಬಿಎ ಅಸ್ತಿತ್ವಕ್ಕೆ, ಒಟ್ಟು 369 ವಾರ್ಡ್ ರಚನೆ, ವಾರ್ಡ್‌ವಾರು ಮೀಸಲು ಕರಡು ಪಟ್ಟಿಯೂ ಸಿದ್ಧ.
- ಜಿಬಿಎ ಜತೆ ಉಳಿದ ರಾಜ್ಯದ ಮಹಾನಗರಪಾಲಿಕೆ, ನಗರಸಭೆಗಳಿಗೂ ಚುನಾವಣೆ ನಡೆಸಲು ಕೂಗು

